ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–560012

ಸಂಖ್ಯೆ:ಪಪೂಶಿಇ/ಪರೀಕ್ಷೆ/ದ್ವಿ.ಪಿ.ಪ್ರಾ.ಪ/2021–22 ದಿನಾಂಕ: 05.02.2022

## <u>ಸುತ್ತೋಲೆ</u>

ವಿಷಯ: 2022ರ ದ್ವಿತೀಯ ಪಿಯುಸಿ ಪ್ರಾಯೋಗಿಕ ಪರೀಕ್ಷೆಗಳನ್ನು ನಡೆಸುವ ಬಗ್ಗೆ ಹೆಚ್ಚುವರಿ ಸೂಚನೆಗಳು.

ಉಲ್ಲೇಖ: 1. ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ: 02.02.2022.

2. ಮಾನ್ಯ ಪ್ರಾಥಮಿಕ ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರ ಟಿಪ್ಪಣಿ ಸಂಖ್ಯೆ: ಪ್ರಾ.ಪ್ರೌ.ಸ.ಸ/92/2021–22 ದಿನಾಂಕ 04/02/2022.

* * * * *

ಮೇಲಿನ ವಿಷಯ ಮತ್ತು ಉಲ್ಲೇಖ (1) ರನ್ವಯ ಈಗಾಗಲೇ 2022ರ ದ್ವಿತೀಯ ಪಿಯುಸಿ ಪ್ರಾಯೋಗಿಕ ಪರೀಕ್ಷೆಗಳನ್ನು ನಡೆಸಲು ಸೂಚನೆಗಳನ್ನು ನೀಡಲಾಗಿತ್ತು ಮತ್ತು ಪ್ರಾಯೋಗಿಕ ಪರೀಕ್ಷಾ ಕೇಂದ್ರಗಳ ಪಟ್ಟಿಯನ್ನು ಅಂತಿಮಗೊಳಿಸಲಾಗಿದೆ. ಆದರೆ ಕೋವಿಡ್–19ರ ಹಿನ್ನೆಲೆಯಲ್ಲಿ ದೂರದ ಪರೀಕ್ಷಾ ಕೇಂದ್ರಗಳಿಗೆ ವಿದ್ಯಾರ್ಥಿಗಳನ್ನು ಕರೆದುಕೊಂಡು ಹೋಗಲು ಅನಾನುಕೂಲವಾಗಿರುವುದರಿಂದ ಅನೇಕ ಕಾಲೇಜುಗಳಿಂದ ಪ್ರಾಯೋಗಿಕ ಪರೀಕ್ಷಾ ಕೇಂದ್ರಗಳನ್ನು ಹೊಸದಾಗಿ ಮಂಜೂರು ಮಾಡಲು ಮನವಿಗಳು ಸ್ವೀಕೃತವಾಗಿರುವ ಹಿನ್ನಲೆಯಲ್ಲಿ ಹಾಗೂ ಮಾನ್ಯ ಶಿಕ್ಷಣ ಸಚಿವರು ಉಲ್ಲೇಖ (2) ಟಿಪ್ಪಣಿಯಲ್ಲಿ ಸೂಚಿಸಿರುವಂತೆ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಈ ಕೆಳಕಂಡಂತೆ ಹೆಚ್ಚುವರಿಯಾದ ಸೂಚನೆಗಳನ್ನು ಪಾಲಿಸಿ 2021–22ನೇ ಸಾಲಿನ ಪ್ರಾಯೋಗಿಕ ಪರೀಕ್ಷೆಗಳನ್ನು ನಡೆಸಲು ಜಿಲ್ಲಾ ಉಪನಿರ್ದೇಶಕರುಗಳಿಗೆ ಸೂಚಿಸಿದೆ.

- ಪ್ರಸಕ್ತ ಸಾಲಿನಲ್ಲಿ ದ್ವಿತೀಯ ಪಿಯುಸಿ ಪ್ರಾಯೋಗಿಕ ಪರೀಕ್ಷೆಗೆ 1030 ಪ್ರಾಯೋಗಿಕ ಪರೀಕ್ಷಾ ಕೇಂದ್ರಗಳನ್ನು ನಿಗಧಿಪಡಿಸಲಾಗಿದೆ.ವಿಜ್ಞಾನ ವಿದ್ಯಾರ್ಥಿಗಳನ್ನೊಂದಿರುವ ಉಳಿದ ಎಲ್ಲಾ ಕಾಲೇಜುಗಳನ್ನು ಈ ಪ್ರಾಯೋಗಿಕ ಪರೀಕ್ಷಾ ಕೇಂದ್ರಗಳಿಗೆ ಟ್ಯಾಗ್ ಮಾಡಲಾಗಿದೆ. ಟ್ಯಾಗ್ ಮಾಡಲಾಗಿರುವ ಕಾಲೇಜುಗಳಲ್ಲಿ ದ್ವಿತೀಯ ಪಿಯುಸಿ ಪ್ರಾಯೋಗಿಕ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳ ಸಂಖ್ಯೆ 80 ಅಥವಾ 80 ಕ್ಕಿಂತಲೂ ಹೆಚ್ಚಾಗಿದ್ದಲ್ಲಿ, ಅಂತಹ ಕಾಲೇಜುಗಳ ಪ್ರಾಂಶುಪಾಲರುಗಳು ಪ್ರಾಯೋಗಿಕ ಪರೀಕ್ಷೆ ನಡೆಸಲು ಇಚ್ಛಿಸಿ ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರಿಗೆ ಮನವಿ ಸಲ್ಲಿಸಿದಲ್ಲಿ, ಮೂಲಭೂತ ಸೌಕರ್ಯಗಳನ್ನು ಪರಿಶೀಲಿಸಿ ಅಂತಹ ಕಾಲೇಜುಗಳಲ್ಲಿಯೇ ಪ್ರಾಯೋಗಿಕ ಪರೀಕ್ಷೆ ನಡೆಸಲು ಅನುಮೋದಿಸುವುದು.

- ಪ್ರಾಯೋಗಿಕ ಪರೀಕ್ಷೆ ನಡೆಸಲಿಚ್ಛಿಸುವ ಕಾಲೇಜುಗಳು ಅನುದಾನರಹಿತ ಕಾಲೇಜುಗಳಾಗಿದ್ದಲ್ಲಿ, ಜಿಲ್ಲಾ ಉಪನಿರ್ದೇಶಕರುಗಳು ಸರ್ಕಾರಿ/ಅನುದಾನಿತ ಕಾಲೇಜಿನ ಪ್ರಾಂಶುಪಾಲರು/ಹಿರಿಯ ಉಪನ್ಯಾಸಕರನ್ನು ಆ ಕಾಲೇಜಿನ ಪ್ರಾಯೋಗಿಕ ಪರೀಕ್ಷೆಯ ಮುಖ್ಯ ಅಧೀಕ್ಷಕರನ್ನಾಗಿ ನೇಮಿಸುವುದು.

- ಅನುದಾನರಹಿತ ಕಾಲೇಜುಗಳಿಗೆ ಸರ್ಕಾರಿ/ಅನುದಾನಿತ ಪದವಿಪೂರ್ವ ಕಾಲೇಜುಗಳ ವಿಜ್ಞಾನ ಉಪನ್ಯಾಸಕರುಗಳನ್ನು ಬಾಹ್ಯ ಪರೀಕ್ಷಕರನ್ನಾಗಿ ನೇಮಿಸುವುದು.

Scanned with CamScanner

- ಪ್ರಾಯೋಗಿಕ ಪರೀಕ್ಷೆ ನಡೆಸಲಿಚ್ಚಿಸುವ ಕಾಲೇಜುಗಳಿಗೆ ನೇಮಿಸಲ್ಪಟ್ಟ ಮುಖ್ಯ ಅಧೀಕ್ಷಕರು, ತಮಗೆ ಸಂಬಂಧಿಸಿದ ಮೂಲ ಪ್ರಾಯೋಗಿಕ ಪರೀಕ್ಷಾ ಕೇಂದ್ರದಿಂದ ಉತ್ತರ ಪತ್ರಿಕೆಗಳು, ಮಾರ್ಕ್ಸ್ ಲಿಸ್ಟ್, ಲಕೋಟೆಗಳು ಹಾಗೂ ಇತರೆ ಮಾಹಿತಿಯನ್ನು ಪಡೆದು ಪ್ರತಿ ದಿನದ ಪರೀಕ್ಷೆ ಮುಗಿದ ತಕ್ಷಣ ಪರೀಕ್ಷಕರೊಂದಿಗೆ ಮೂಲ ಪರೀಕ್ಷಾ ಕೇಂದ್ರಕ್ಕೆ ತೆರಳಿ ವಿದ್ಯಾರ್ಥಿಗಳು ಪಡೆದ ಅಂಕಗಳನ್ನು ಆನ್‌ಲೈನ್‌ನಲ್ಲಿ ದಾಖಲಿಸಿ, ವಿದ್ಯಾರ್ಥಿಗಳು ಉತ್ತರಿಸಿದ ಉತ್ತರ ಪತ್ರಿಕೆಗಳ ಲಕೋಟೆ ಹಾಗೂ ಮಾರ್ಕ್ಸ್ ಲಿಸ್ಟ್ ಲಕೋಟೆಗಳನ್ನು ಆಯಾ ದಿನವೇ ಮೂಲ ಪ್ರಾಯೋಗಿಕ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರಿಗೆ ಹಿಂದಿರುಗಿಸಿ ಸ್ವೀಕೃತಿ ಪಡೆಯುವುದು.
- ಮೂಲ ಪ್ರಾಯೋಗಿಕ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು ಮೇಲಿನ ಉಲ್ಲೇಖಿತ ಸುತ್ತೋಲೆಯನ್ವಯ ಎಲ್ಲಾ ಸೂಚನೆಗಳನ್ನು ಪಾಲಿಸುವುದು.
- ದ್ವಿತೀಯ ಪಿಯುಸಿ ಪ್ರಾಯೋಗಿಕ ಪರೀಕ್ಷೆಯಲ್ಲಿ ಯಾವುದೇ ಲೋಪಗಳಾಗದಂತೆ ಜಿಲ್ಲಾ ಉಪನಿರ್ದೇಶಕರು ಕ್ರಮ ವಹಿಸುವುದು. ಪರೀಕ್ಷೆ ನಡೆಸುವಲ್ಲಿ ಯಾವುದೇ ಲೋಪಗಳಾದಲ್ಲಿ ಜಿಲ್ಲಾ ಉಪನಿರ್ದೇಶಕರೇ ನೇರ ಹೊಣೆಗಾರರಾಗಿರುತ್ತಾರೆ ಮತ್ತು ನಿಯಮಾನುಸಾರ ಇಲಾಖೆಯಿಂದ ಅವರ ಮೇಲೆ ಶಿಸ್ತಿನ ಕ್ರಮ ಜರುಗಿಸಲಾಗುವುದು.

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ

**ಪ್ರತಿಗಳು:**

1. ರಾಜ್ಯದ ಎಲ್ಲಾ ಜಿಲ್ಲೆಗಳ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರುಗಳಿಗೆ (ಮುಂದಿನ ಕ್ರಮಕ್ಕಾಗಿ),
2. ಪದವಿ ಪೂರ್ವ ಶಿಕ್ಷಣ ಬೋಧಿಸುವ ರಾಜ್ಯದ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳಿಗೆ,
3. ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು (ಇಲಾಖಾ ಅಂತರ್ಜಾಲದಲ್ಲಿ ಪ್ರಕಟಿಸಲು)
4. ಹೆಚ್ಚುವರಿ/ಕಛೇರಿ ಪ್ರತಿ.

Scanned with CamScanner